**<u>ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ</u>**

## <u>ಸಿ.ಸಿ.ನಂ.1782/2021</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ರಮೇಶ | ಸಿ.ಡಬ್ಲ್ಯೂ-4 |
| ತಂದೆಯ ಹೆಸರು | : | ಚಿಕ್ಕನಾಯಕ | ಪಿ.ಡಬ್ಲ್ಯೂ-3 |
| ವಯಸ್ಸು | : | 28 ವರ್ಷ | - |
| ಉದ್ಯೋಗ | : | ವ್ಯವಸಾಯ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ **13.10.2023.** |
| ವಾಸಸ್ಥಳ | : | ಚಾಮೇಗೌಡನಹುಂಡಿ ಗ್ರಾಮ | - |

**<u>ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ</u>**

ಚಾಸಾ- 3 ಗೊತ್ತು ಮತ್ತು ಆರೋಪಿ ನನಗೆ ಗೊತ್ತಿಲ್ಲ. ನಾನು ನನ್ನ ವೈಯಕ್ತಿಕ ಕೆಲಸಕ್ಕೆ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯು ತಮ್ಮದೇ ಎಂದು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೆ ನಿಪಿ-2 ಎಂದು ಗುರುತಿಸಲಾಗಿದ್ದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ, ಪೊಲೀಸರು ಸಹಿ ಮಾಡುವಂತೆ ಹೇಳಿದ್ದಕ್ಕೆ ನಾನು ಸಹಿ ಮಾಡಿರುತ್ತೇನೆ.

**(ಎಪಿಪಿಯವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲುಃ ಎಪಿಪಿ ರವರಿಂದಃ</u>**

ದಿನಾಂಕಃ 27.04.2021 ರಂದು ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ಆರೋಪಿಯ ಬಾಬ್ತು 90 ಎಂ ಎಲ್ ನ 30 ಸಾರಾಯಿ ಪೌಚುಗಳನ್ನು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿ ಕೇಳಿಕೊಂಡ ನಿ.ಪಿ -4 ರಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನನ್ನ ಮುಂದೆ ಆರೋಪಿಯ ಬಾಬ್ತು ಸಾರಾಯಿ ಪೌಚುಗಳನ್ನು ಅಮಾನತ್ತುಪಡಿಕೊಂಡಿದ್ದರೂ ಅಮಾನತ್ತುಪಡಿಸಿಕೊಂಡಿಲ್ಲ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ</u>**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**